ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ವಿಭಾಗ
ಜಿ.ಕೆ.ವಿ.ಕೆ., ಬೆಂಗಳೂರು-560065

* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 29.04.2016

ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

ಈ ವಾರದ ಮುನ್ಸೂಚನೆ (ದಿನಾಂಕ 30.04.16–04.05.16 ವರೆಗೆ)

	30.04.16	01.05.16	02.05.16	03.05.16	04.05.16
ಮಳೆ (ಮಿ ಮಿ)	0	0	0	0	3
ಗರಿಷ್ಠ ಉಷ್ಣಾಂಶ(ಡಿ.ಸೆ.)	39	39	38	38	38
ಕನಿಷ್ಠ ಉಷ್ಣಾಂಶ (ಡಿ.ಸೆ.)	23	23	23	23	22
ಮೋಡ (ಪ್ರಮಾಣ)	0	0	0	0	4
ಅರ್ದ್ರತೆ ೭.೨೦ ಬೆ (ಶೇ)	46	45	48	46	60
ಅರ್ದ್ರತೆ ೨.೨೦ ಮ (ಶೇ)	37	37	33	36	38
ಗಾಳಿಯ ವೇಗ (ಕಿ.ಮಿ/ಗಂಟೆಗೆ)	2	2	4	2	2
ಗಾಳಿಯ ದಿಕ್ಕು (ಡಿಗ್ರಿ)	230	240	270	240	230

ಮುಂಬರುವ 5 ದಿನಗಳಲ್ಲಿ ಚದುರಿದಂತೆ ತುಂತುರು ಮಳೆಯಾಗುವ ಸಾಧ್ಯತೆಯಿದೆ. ದಿನದ ಗರಿಷ್ಠ ಉಷ್ಣಾಂಶ **38.0-39.0° ಸೆ** ಮತ್ತು ಕನಿಷ್ಠ **22.0-23.0° ಸೆ** ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **45-60 %** ಇದ್ದು ಮಧ್ಯಾಹ್ನ **33-38 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **2-4** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ಪೂರ್ವ ಮುಂಗಾರಿಗೆ ಈ ಕೆಳಗಿನ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ.
  ರಾಗಿ: ಇಂಡಾಫ್-9, ಎಳ್ಳು : ನವಿಲೆ-1, ಟಿ-7, ಅಲಸಂದೆ : ಟಿ.ವಿ.ಎಕ್ಸ್-944, ಕೆ.ಬಿ.ಸಿ-1
  ಹೆಸರು :ಪಿ.ಎಸ್-16, ಪಿ.ಡಿ.ಎಮ್-84, 178 , ಉದ್ದು: ಕರಗಾವ್-3, ಟಿ-9, ರಶ್ಮಿ
- ನೀರು ಬರಿದಾಗಿರುವ ಕೆರೆಗಳಲ್ಲಿ ಗೋಡು ಮಣ್ಣನ್ನು ತೆಗೆದು ಭೂಮಿಗೆ ಸೇರಿಸುವುದರಿಂದ ಭೂಮಿಯ ಫಲವತ್ತತೆಯನ್ನು ಹೆಚ್ಚಿಸಬಹುದು
- ಏಪ್ರಿಲ್ ಮತ್ತು ಮೇ ತಿಂಗಳುಗಳಲ್ಲಿ ಸರಾಸರಿ 40 ಮತ್ತು 93 ಮಿ.ಮೀ ಇರುವುದರಿಂದ ಮೊದಲನೆ ಬೆಳೆಯಾಗಿ ಅಲಸಂದೆ, ಎಳ್ಳು, ಉದ್ದು, ಹೆಸರು ಮೇ ತಿಂಗಳಿನಲ್ಲಿ ಬಿತ್ತ ಬಹುದಾದ ಇವುಗಳ ಬೇಸಾಯಕ್ಕೆ ಪರಿಕರಗಳ ಪೂರಕಗಳನ್ನು ಸಿದ್ಧತೆ ಮಾಡಿಕೊಳ್ಳಿ.
- ಹಿಂಗಾರಿ ಬೆಳೆಗಳ ಉಳಿಕೆಗಳನ್ನು ಸುಡಬಾರದು, ಅದನ್ನು ಗೊಬ್ಬರ ತಯಾರಿಸಲು ಉಪಯೋಗಿಸಬೇಕು
- ಬರುವ ದಿನಗಳಲ್ಲಿ ಬಿಸಿಲಿನ ತಾಪ ಹೆಚ್ಚಾಗುವುದು. ಅದ್ದರಿಂದ ತರಕಾರಿ ಬೆಳೆಗಳಿಗೆ ಸರಿಯಾದ ಪ್ರಮಾಣದಲ್ಲಿ ನೀರು ಒದಗಿಸಬೇಕು
  ಮಾವು: ತೇವಾಂಶದ ರಕ್ಷಣೆಗೆ ಬೆಳೆಗಳ ಉಳಿಕೆ ಮತ್ತು ಕಳೆಗಳನ್ನು ಕತ್ತರಿಸಿ ಹೊದಿಕೆ ಮಾಡುವ್ಯದು.
- ಮಾವಿನ ಮರದ ಕೆಳಗೆ ಬೆಳೆದಿರುವ ಕಳೆಗಿಡಗಳನ್ನು ಕಡಿದುಹಾಕಿ ಸ್ವಚ್ಚಗೊಳಿಸಬೇಕು.
- ಮಾವಿನ ಗಿಡದ ಕೆಳಗೆ ಬೆಳೆದಿರುವ ಹುತ್ತಗಳನ್ನು ನಾಶಪಡಿಸಬೇಕು ಮತ್ತು ಗೆದ್ದಲು ಹುಳುಗಳನ್ನು ನಾಶಪಡಿಸಲು ಕ್ಲೋರೊಪೈರಿಫಾಸ್ 5-10 ಮಿ.ಲೀ/ಪ್ರತಿ ಲೀ ನಿರಿಗೆ ಬೆರಸಿ ಹುತ್ತಗಳಿಗೆ ಸುರಿಯಬೇಕು ಅಥವಾ ಒಂದು ಮೀಟರ್ ಸುತ್ತಳತೆ ಇರುವ ಹುತ್ತಕ್ಕೆ 2 ಅಲ್ಯೂಮಿನಿಯಂ ಫಾಸ್ಫೈಡ್ ಮಾತ್ರೆಗಳನ್ನು ಹಾಕಿ ಗಾಳಿ ಹೊರ ಹೋಗದಂತೆ ಎಲ್ಲಾ ರಂಧ್ರಗಳನ್ನು ಹಸಿ ಮಣ್ಣಿನಿಂದ ಮುಚ್ಚಿ.
- ಜಾನುವಾರು: ಬಿಸಿಲು ಹೆಚ್ಚಾಗಿರುವುದರಿಂದ ಹಸಿರು ಹುಲ್ಲಿನ ಅಭಾವ ಕಂದುಬರುತ್ತದೆ ಆದುದರಿಂದ ಹಗೇವಿನಲ್ಲಿ ರಸಮೇವನ್ನು ತಯಾರಿಸಿ ದನಕರುಗಳಿಗೆ ಕೊಡಿ.
- ಕೊಟ್ಟಿಗೆಯನ್ನು ಶುಚಿಯಾಗಿ ಇಟ್ಟುಕೊಳ್ಳುವುದು ಮತ್ತು ಜಾನುವಾರುಗಳನ್ನು ಬಿಸಿಲಿನಿಂದ ರಕ್ಷಿಸಬೇಕು.
- ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು.
- ಉಷ್ಣಾಂಶವು ಹೆಚ್ಚಾಗುತ್ತಿರುವುದರಿಂದ ದನಕರುಗಳನ್ನು ಬೆಳಿಗ್ಗೆ ಮತ್ತು ಸಂಜೆಯ ಹೊತ್ತಿನಲ್ಲಿ ಮೇಯಿಸಲು ಹೊರಗೆ ಬಿಡಿ.

ನೋಡಲ್ ಅಧಿಕಾರಿ:
ಕೃ.ವಿ.ವಿ, ಜಿ.ಕೆ.ವಿ.ಕೆ
ಬೆಂಗಳೂರು